



ಅರುಣ ಪಿ. ಭಟ್ಟ

## ವಾರಭವಿಷ್ಯ 10.6.2021ರಿಂದ 16.6.2021ರವರೆಗೆ



**ಮೇಷ**

ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 15. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ವ್ಯವಹಾರ, ಒಪ್ಪಂದ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 12. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.



**ಮಿಥುನ**

ಆರೋಗ್ಯ ಸುಧಾರಿಸುವುದು. ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರಿದಿ ಬಗ್ಗೆ ಚಿಂತನೆ ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ– ತಾಯಿಯವರ ಆರೋಗ್ಯ ಸುಧಾರಣೆ, ಸನ್ಮಾನ ದೊರೆಯುವುದು. ಶುಭದಿನ 11. ಚಂಡಿ ಪಾರಾಯಣ ಮಾಡಿರಿ.



**ಕಟಕ**

ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಸಿಗಲಿದೆ. ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರೆಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ.ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ ಮಾಡಲಿದ್ದೀರಿ. ಸಹೋದರರ ನಿಮಗೆ ಸಹಾಯ ಸಿಗಲಿದೆ. ಶುಭದಿನ 10. ಶಿವ ಕವಚ ಓದಿರಿ.



**ಸಿಂಹ**

ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾಗುತ್ತದೆ. ಶುಭದಿನ 12. ಸೌಂದರ್ಯಲಹರಿ ಪಠಿಸಿರಿ.



**ಕನ್ಯಾ**

ಎಂಜಿನಿಯರ್ ಕ್ಷೇತ್ರದವರಿಗೆ ಹೆಚ್ಚಿನ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಹಣಕಾಸಿನ ಖರ್ಚು ಹೆಚ್ಚಾಗುವ ಸಾಧ್ಯತೆಗಳಿವೆ. ಶುಭದಿನ 13. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



**ತುಲಾ**

ಈ ವಾರ ಬದುಕಿನಲ್ಲಿ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ವ್ಯಾಜ್ಯಗಳು ಇದ್ದಲ್ಲಿ ಎದುರು ಪಕ್ಷದವರು ಸರಿಸಮವಾದ ಹೋರಾಟ ಮಾಡುತ್ತಾರೆ. ಶುಭದಿನ 11. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.



**ವೃಶ್ಚಿಕ**

ಖರ್ಚುಗಳು ಹೆಚ್ಚಾಗಿ ಚಿಂತಿತರಾಗುತ್ತೀರಿ. ಮುಖ್ಯವಾಗಿ ವಾರವಿಡಿ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವೈಯಕ್ತಿಕ ಸಂಬಂಧಗಳು ಉತ್ತಮವಾಗಿರುತ್ತದೆ. ಶುಭದಿನ 15. ಶ್ರೀ ದುರ್ಗಾಪಾರಾಯಣ ಮಾಡಿರಿ.



**ಧನಸ್ಸು**

ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಕಾಗದಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಭುಜದ ನೋವು, ತಲೆ ನೋವು ನಿಮ್ಮನ್ನು ಕಾಡಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗುತ್ತದೆ. ಶುಭದಿನ 14. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಮಕರ**

ವ್ಯಾಪಾರಿಗಳು ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಈ ವಾರ ಆರೋಗ್ಯದಲ್ಲಿ ಸಮಸ್ಯೆ ಕಾಡುವುದಿಲ್ಲ. ಇದರಿಂದ ಎಷ್ಟೇ ಚಟುವಟಿಕೆ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ನಿರ್ಧರಿಸುತ್ತೀರಿ. ಶುಭದಿನ 10. ಕಾಲಭೈರವನ ಸೇವೆ ಮಾಡಿರಿ.



**ಕುಂಭ**

ವಾರದ ಶುರುವಿನಲ್ಲಿ ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಭೂಮಿ ಖರೀದಿ ಮಾಡುವ ಸಾಧ್ಯತೆಗಳಿವೆ. ಶುಭದಿನ 16. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಮೀನ**

ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುತ್ತದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ಕೆಮ್ಮು ನೆಗಡಿ ಕಾಡಬಹುದು. ಶುಭದಿನ 13. ಕನಕಧಾರಾ ಸ್ತೋತ್ರ ಪಠಣಮಾಡಿರಿ.